# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 21, ಹೆಬ್ಬಾಳ, ಬೆಂಗಳೂರು.

ಸಂಖ್ಯೆ: ಸ.ಅ/ವಾ-21/ಪಿ.ಆರ್/04/2020-21 ದಿನಾಂಕ:09-11-2020.

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/20-21 ದಿನಾಂಕ:21-09-2020, ರವರ ಆದೇಶದಂತೆ ದಿನಾಂಕ:07-11-2020 ರಂದು ವಾರ್ಡ್ ನಂ:21 ಹೆಬ್ಬಾಳ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

"ಸಭೆಗೆ ಹಾಜರಾಗಿದ್ದವರ ವಿವರಗಳು"

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಿ |
|---|---|---|---|
| 01 | ಎಂ.ವೆಂಕಟಾಚಲಪತಿ ಜಂಟಿ ಆಯುಕ್ತರು (ಕಂದಾಯ) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು | ಹಾಜರಿ |
| 02 | ಮುಕೇಶ್ ಎಸ್ ಬಿರಾದಾರ್ ಎ.ಇ) | ಸದಸ್ಯ ಕಾರ್ಯದರ್ಶಿ ವಾರ್ಡ್ ನಂ: 21 | ಹಾಜರಿ |
| 03 | ಸೋಮಶೇಖರ | ಕಿರಿಯ ಆರೋಗ್ಯ ಪರಿವೀಕ್ಷಕರುವಾಡ್ ನಂ: 21, ಸದಸ್ಯರು | ಹಾಜರಿ |
| 04 | ಲಯ್ಗುರ್ ಆರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸದಸ್ಯರು | ಹಾಜರಿ |
| 05 | ರಾಧಾ ಈ | ಕಿರಿಯ ಅಭಿಯಂತರರು ಬೆಸ್ಕಾಂ ಸದಸ್ಯರು | ಹಾಜರಿ |
| 06 | ಮಂಜುನಾಥ ಎಂ | ಲೈನ್ ಮ್ಯಾನ್ ಸದಸ್ಯರು | ಗೈರುಹಾಜರಿ |
| 07 | ನಟರಾಜ | ಕಂದಾಯ ಮೌಲ್ಯಮಾಪಕರು, ಸದಸ್ಯರು | ಗೈರುಹಾಜರಿ |
| 08 | ರಾಮಣ್ಣ. ಎನ್ | ತೆರಿಗೆ ನೀರಿಕ್ಷಕರು ವಾರ್ಡ್-21 | ಹಾಜರಿ |
| 09 | ಹರೀಶ್ ಕುಮಾರ್ | ಕೆಲಸ ಪರಿವೀಕ್ಷಕರು, ಸದಸ್ಯರು | ಹಾಜರಿ |
| 10 | ವೀರಶೇಖರಸ್ವಾಮಿ | ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಸದಸ್ಯರು | ಹಾಜರಿ |
| 11 | ಅನೂಪ್. ಎಸ್.ಎನ್ | ಸ್ಥಳೀಯ ನಿವಾಸಿ | ಹಾಜರಿ |
| 12 | ಎನ್. ಶ್ರೀನಿವಾಸನ್ | ಸ್ಥಳೀಯ ನಿವಾಸಿ | ಹಾಜರಿ |
| 13 | ಆನಂದ ಕುಮಾರ್ | ಸ್ಥಳೀಯ ನಿವಾಸಿ | ಹಾಜರಿ |
| 14 | ಎನ್. ಪ್ರಕಾಶ್ | ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಕಾರ್ಯದರ್ಶಿಗಳು | ಹಾಜರಿ |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ.ಎಂ.ವೆಂಕಟಾಚಲಪತಿ ಮತ್ತು ಕಾರ್ಯದರ್ಶಿಗಳಾದ ಶ್ರೀ ಮುಕೇಶ್ ಎಸ್. ಬಿರಾದರ್ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ: 21 ರವರು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸಲು ಸಾರ್ವಜನಿಕರಿಗೆ ತಿಳಿಯಪಡಿಸಿದರು.

- ದಿನಾಂಕ : 17-10-2020 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.
- <u>ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ:</u>

1. ವಾರ್ಡ್‌ನ ಬ್ಲಾಕ್‌ಸ್ಪಾಟ್‌ಗಳಲ್ಲು ಸ್ವಚ್ಛಗೊಳಿಸಲು ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣ ಸಹಾಯಕ ಕಾರ್ಯಪಾಲಕ ಅಭಿಯಂತರರು/ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಗತ್ಯಾ ಕ್ರಮ ವಹಿಸಲು ಸೂಚಿಸಲಾಯಿತು.
2. ಪ್ರತಿ ದಿನ ವಾರ್ಡ್ ಪ್ರದೇಶದಲ್ಲಿ ಉತ್ಪತ್ತಿಯಾಗು ತ್ಯಾಜ್ಯ ವಿಲೇವಾರಿ ಅಭಿವೃದ್ಧಿ ಮಾಡುವಂತೆ ಸಂಬಂದಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

Scanned with CamScanner

3. ವಾರ್ಡ್ ವ್ಯಾಪ್ತಿಯಲ್ಲಿ ಕಸ ವಿಲೇವಾರಿ [illegible] ಸೂಚಿಸಲಾಯಿತು.

- <u>ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಗೆ:</u>
  1. ವಾರ್ಡ್ ಪ್ರದೇಶ ಸಾರ್ವಜನಿಕರಿಗೆ ಕೋವಿಡ್-19 ರ ಪರೀಕ್ಷೆ (Rapid Checkup) ಹೆಚ್ಚು ಮಾಡುವಂತೆ ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು.

- <u>ಬೆಸ್ಕಾಂ ವಿಭಾಗ ರವರಿಗೆ:</u>
  1. ರಸ್ತೆಯ ಬೀದಿ ಕೇಬಲ್ ದುರಸ್ಥಿಯನ್ನು ಬೆಸ್ಕಾಂ ಈ ಕೂಡಲೇ ಸರಿಪಡಿಸುವಂತೆ ಸೂಚಿಸಲಾಯಿತು.
  2. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳ ದುರಸ್ಥಿಯನ್ನು ಸರಿಪಡಿಸುವಂತೆ ಸೂಚಿಸಲಾಯಿತು.
  3. ವಾರ್ಡಿನ ಕೆಲವು ಭಾಗದಲ್ಲಿ ವಿದ್ಯುತ್ ಕಂಬ್ಬಗಳು ದುರಸ್ಥಿಯಲ್ಲಿದ್ದು ಸಾರ್ವಜನಿಕರಿಗೆ ಅಪಾಯವಾಗುವ ಸಾದ್ಯತೆಗಳು ಹೆಚ್ಚಾಗಿರುವುದರಿಂದ ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.
  4. ವಾರ್ಡ್ ಪ್ರದೇಶಗಳಲ್ಲಿ ವಿದ್ಯುತ್ ಕಂಬಗಳ ಮೇಲೆ ಚಾಚಿಕೊಂಡಿರುವ ಮರದ ರೆಂಬೆಗಳನ್ನು ತೆರವುಗೊಳಸಲು ಅಗತ್ಯ ಕ್ರಮ ವಹಿಸುವಂತೆ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.

- <u>ಬಿಡಬ್ಲ್ಯೂಎಸ್ಎಸ್ಬಿ ರವರಿಗೆ:</u>
  1. ವಾರ್ಡ್ ವ್ಯಾಪ್ತಿಯಲ್ಲಿ ಬಿಡಬ್ಲ್ಯೂಎಸ್ಎಸ್ಬಿ ರವರು ರಸ್ತೆ ಅಗೆತದಿಂದ ಆಗಿರುವ ರಸ್ತೆ ದುರಸ್ಥಿಯನ್ನು ಸರಿಪಡಿಸುವಂತೆ ಸೂಚಿಸಲಾಯಿತು.

- <u>ಅರಣ್ಯ ಇಲಾಖೆಗೆ:</u>
  1. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಬದಿಯಲ್ಲಿರುವ ಮರಗಳ ಕೊಂಬೆಗಳನ್ನು ತೆರವುಗೊಳಸಲು ಕ್ರಮ ವಹಿಸುವಂತೆ ಸೂಚಿಸಲಾಯಿತು.

- <u>ಕಾಮಗಾರಿ ಇಲಾಖೆಗೆ.</u>
  1. ಆನಂದ ನಗರ 1ನೇ ಅಡ್ಡ ರಸ್ತೆ, ಚೋಲನಾಯಕನಹಳ್ಳಿ ಮುಖ್ಯ ರಸ್ತೆ, ಹಾಗೂ ಸುಮಂಗಳ ಸೇವಾಶ್ರಮ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪಾಟ್ ಹೋಲ್ಸ್ (Pot holes) ಕಾಮಗಾರಿಯನ್ನು ನಿರ್ವಹಿಸುವಂತೆ ಸೂಚಿಸಲಾಯಿತು.
  2. ಆನಂದ ನಗರ 1ನೇ ಅಡ್ಡ ರಸ್ತೆ, (Aspalts) ಕಾಮಗಾರಿಯನ್ನು ಈ ಕೂಡಲೇ ನಿರ್ವಹಿಸಲು ಸೂಚಿಸಲಾಯಿತು.
  3. ರಸ್ತೆಯ ಚರಂಡಿಗಳ ನಿರ್ಜಲೀಕರಣ ಕ್ರಮವನ್ನು ಕೈಗೊಳ್ಳುವಂತೆ ಸೂಚಿಸಲಾಯಿತು.

- <u>ಕಂದಾಯ ಇಲಾಖೆ:</u>
  1. ಸಂಬಂಧಪಟ್ಟ ವಾರ್ಡ್ ಪ್ರದೇಶಗಳಲ್ಲಿ ಸ್ವತ್ತಿನ ತೆರಿಗೆಗಳನ್ನು ವಸೂಲಿ ಮಾಡಲು ಸೂಚಿಸಲಾಯಿತು.

- (Storm Water Drains) ಸ್ವಚ್ಚಗೊಳಿಸುವಂತೆ ಸಂಬಂಧಪಟ್ಟ ಪಾಲಿಕೆ ಅಧಿಕಾರಿಗೆ ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 21, ಹೆಬ್ಬಾಳ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 21, ಹೆಬ್ಬಾಳ

<u>ಪ್ರತಿಯನ್ನು:-</u>

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು(ಪೂರ್ವ)ಬಿಬಿಎಂಪಿರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
6. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
9. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.

Scanned with CamScanner